**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿ.ಸಿ. ನಂ. 3839/2021**

| | | | |
|---|---|---|---|
| **ಹೆಸರು** | **:** | **ಹನುಮಂತ** | **ದೋ.ಸಾ. 6** |
| **ತಂದೆಯ ಹೆಸರು** | **:** | **ಭೀಮಯ್ಯ** | **ಪ್ರಾ.ಸಾ. 3** |
| **ವಯಸ್ಸು** | **:** | **31 ವರ್ಷ** | **ದಿನಾಂಕಃ 14-02-2024** |
| **ಉದ್ಯೋಗ** | **:** | **ಕೂಲಿ** | |
| **ವಾಸಸ್ಥಳ** | **:** | **ಕಲ್ಲೂರು** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ನನಗೆ ಈ ಪ್ರಕರಣದ ಸಾಕ್ಷಿದಾರರಾದ ಚಾಸಾ-1 ಮತ್ತು 7 ರಿಂದ 9 ಗೊತ್ತಿಲ್ಲ.

ಮೃತ ರಾಕೇಶ ನನಗೆ ಗೊತ್ತಿಲ್ಲ.

ಈ ಪ್ರಕರಣದ ಬಗ್ಗೆ ಮತ್ತು ಈ ಪ್ರಕರಣದಲ್ಲಿ ನಡೆದಿದೆ ಎನ್ನಲಾದ ಅಪಘಾತದ ಬಗ್ಗೆ ನನಗೆ ಏನು ಗೊತ್ತಿಲ್ಲ. ಈ ಪ್ರಕರಣದಲ್ಲಿ ನಡೆದಿದೆ ಎನ್ನಲಾದ ಅಪಘಾತವನ್ನು ನಾನು ಕಣ್ಣಾರೆ ಕಂಡಿಲ್ಲ. ನಾನು ಗಾಯಾಳನ್ನು ಆಸ್ಪತ್ರೆಗೆ ಸೇರಿಸಿಲ್ಲ.

ಈ ದಿನ ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿ ರಾಜಪ್ಪ ನನಗೆ ಗೊತ್ತಿಲ್ಲ.

ಪೋಲೀಸರು ಈ ಪ್ರಕರಣದ ಸಂಬಂಧ ನನ್ನನ್ನು ವಿಚಾರಣೆ ಮಾಡಿಲ್ಲ. ಪೋಲೀಸರ ಮುಂದೆ ನಾನು ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಕೊಟ್ಟಿರುವ ಹೇಳಿಕೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಆರೋಪಿ ನಮ್ಮ ಊರಿನವನು ಎಂದು ಸೂಚಿಸಿದರೆ ಸಾಕ್ಷಿ ನನಗೆ ಗೊತ್ತಿಲ್ಲ ಎನ್ನುತ್ತಾರೆ. ಆರೋಪಿ ನಮ್ಮ ಊರಿನವನಾಗಿದ್ದರೂ ಸುಳ್ಳು ಹೇಳುತ್ತಿದ್ದೇನೆ ಎನ್ನುವುದು ಸರಿಯಲ್ಲ.

ಇನ್ನುಳಿದಂತೆ ದಿನಾಂಕಃ 14-03-2021 ರಂದು ಸಾಕ್ಷಿ ಕೊಟ್ಟಿದ್ದಾರೆ ಎನ್ನಲಾದ ಹೇಳಿಕೆಯ ಸಂಪೂರ್ಣ ಭಾಗವನ್ನು ಸ.ಸ.ಅ. ರವರು ಸಾಕ್ಷಿಗೆ ಓದಿ ಹೇಳುತ್ತಾರೆ. ಅದನ್ನು ಕೇಳಿಸಿಕೊಂಡ ಸಾಕ್ಷಿ, ಈಗ ನೀವು ನನಗೆ ಓದಿ ಹೇಳಿದ ರೀತಿಯ ಯಾವುದೇ ಹೇಳಿಕೆಯನ್ನು ನಾನು ಪೋಲಿಸರ ಮುಂದೆ ಕೊಟ್ಟಿಲ್ಲ ಎನ್ನುತ್ತಾರೆ.

ಸಾಕ್ಷಿ ಕೊಟ್ಟಿದ್ದಾರೆ ಎನ್ನಲಾದ ಹೇಳಿಕೆಯನ್ನು ಈಗ ನಿಪಿ-3 ಎಂದು ಗುರುತಿಸಲಾಯಿತು.

ನಿಪಿ-3 ರಂತೆ ಪೋಲೀಸರ ಮುಂದೆ ಹೇಳಿಕೆ ಕೊಟ್ಟಿದ್ದರೂ ಸಹ ಈಗ ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ವಿ.ಬಿ.ಡಿ. ವಕೀಲರಿಂದಃ ಇಲ್ಲಾ**

**ಮರುವಿಚಾರಣೆಃ ಇಲ್ಲಾ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**